**ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಪ್ರತಾಪ ಸಿಂಹ ನಾಯಕ್.ಕೆ ಇವರು ನಿಯಮ 330 ರಡಿ ಸಲ್ಲಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ವಿಷಯ: ಹೊಸ ಬಗೆಯ ಪ್ರವಾಸಿ ಆಕರ್ಷಣೆಗಳಿಗೆ ಪೂರಕವಾದ ಭೌಗೋಳಿಕ, ಸಾಂಸ್ಕೃತಿಕ ಹಾಗೂ ಪಾರಂಪರಿಕ ಹಿನ್ನೆಲೆಯನ್ನು ಹೊಂದಿರುವ ಹಾಗೂ ಪ್ರವಾಸೋದ್ಯಮ ಅಭಿವೃದ್ಧಿಗೆ ಹೇರಳ ಅವಕಾಶಗಳಿರುವ ಕರಾವಳಿಯ ಪ್ರವಾಸೋದ್ಯಮ ಅಭಿವೃದ್ಧಿಗೆ ಸರ್ಕಾರ ಪೂರಕವಾದ ಯೋಜನೆಗಳನ್ನು ರೂಪಿಸಿ ಅನುಷ್ಠಾನಕ್ಕೆ ತರಬೇಕಾಗಿತ್ತು. ಪ್ರವಾಸೋದ್ಯಮ ಚಟುವಟಿಕೆಗಳನ್ನು ಯೋಜಿತ ರೀತಿಯಲ್ಲಿ ನಡೆಸಲು ಹಾಗೂ ಉತ್ತೇಜನ ನೀಡಲು "ಕರಾವಳಿ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿ" ಯನ್ನು ಸ್ಥಾಪಿಸಲು ಸರ್ಕಾರ ಈಗಾಗಲೇ ಕ್ರಮ ವಹಿಸಬೇಕಾಗಿತ್ತು.**

**ಕರಾವಳಿಯಲ್ಲಿ ಯೋಜಿತ, ಸುಸ್ಥಿರ ಹಾಗೂ ಪರಿಸರಸ್ನೇಹಿ ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಮಾಸ್ಟರ್ ಪ್ಲಾನ್ ರೂಪಿಸಿ ಆ ಮೂಲಕ ಮೂಲಸೌಕರ್ಯ ಅಭಿವೃದ್ಧಿ ಹಾಗೂ ಸಮುದಾಯದ ಸಹಭಾಗಿತ್ವಕ್ಕೆ ಸಂಬಂಧಿಸಿದಂತೆ ಸಮನ್ವಯ ಸಾಧಿಸಲು ಸರ್ಕಾರ ಇದುವರೆಗೆ ಯಾವುದೇ ಸೂಕ್ತ ಕ್ರಮ ವಹಿಸದೇ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಗಮನ ಸೆಳೆದಿರುವ ಬಗ್ಗೆ.**

**ಉತ್ತರ:**

2023-24 ನೇ ಸಾಲಿನ ಆಯವ್ಯಯ ಘೋಷಣೆಯ ಕಂಡಿಕೆ-297 ರಲ್ಲಿ "ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಕಡಲ ತೀರದ ಪ್ರವಾಸೋದ್ಯಮ ಅಭಿವೃದ್ಧಿಗೆ ಕರಾವಳಿ ತೀರದ ಪ್ರವಾಸೋದ್ಯಮ ಕಾರ್ಯಪಡೆಯನ್ನು ರಚಿಸುವ ಹಾಗೂ ಕಡಲ ತೀರದ ಸಮಗ್ರ ಅಭಿವೃದ್ಧಿಗಾಗಿ ವಿಸ್ತೃತ ಯೋಜನೆಯನ್ನು ತಯಾರಿಸಲಾಗುವುದು" ಎಂದು ಘೋಷಿಸಿರುತ್ತಾರೆ. ಈ ಸಂಬಂಧ ಸರ್ಕಾರದ ಆದೇಶ ಸಂಖ್ಯೆ: ಟಿಒಆರ್/154/ಟಿಡಿಬಿ/2023, ದಿನಾಂಕ: 21.08.2024 ರಲ್ಲಿ ಜಿಲ್ಲಾ ಮಟ್ಟ, ರಾಜ್ಯ ಮಟ್ಟದ ಕರಾವಳಿ ಬೀಚ್ ಕಾರ್ಯಪಡೆ ಸಮಿತಿಯನ್ನು ರಚಿಸಿ ಆದೇಶಿಲಾಗಿದೆ. ಸದರಿ ಕರಾವಳಿ ಪ್ರವಾಸೋದ್ಯಮ ಅಭಿವೃದ್ಧಿ ಕಾರ್ಯಪಡೆಯು ಕರಾವಳಿ ಪ್ರದೇಶಗಳಲ್ಲಿ ಪ್ರವಾಸೋದ್ಯಮ ಅಭಿವೃದಿಗೆ ಮಾಸ್ಟರ್ ಪ್ಲ್ಯಾನ್ ತಯಾರಿಸುವಲ್ಲಿ ಮತ್ತು ಅನುಷ್ಠಾನಗೊಳಿಸುವಲ್ಲಿ ಪ್ರಮುಖ ಪಾತ್ರ ವಹಿಸಲಿದೆ.

ಇದಲ್ಲದೇ, ಕರ್ನಾಟಕ ಪ್ರವಾಸೋದ್ಯಮವು ಕರಾವಳಿ ಕರ್ನಾಟಕವನ್ನು ಬಹು-ಉತ್ಪನ್ನ ಪ್ರವಾಸಿ ತಾಣವನ್ನಾಗಿ ಅಭಿವೃದ್ಧಿಪಡಿಸಲು ಮತ್ತು ವಿರಾಮ, ಮನರಂಜನಾ ಮತ್ತು ಸಾಹಸ ಚಟುವಟಿಕೆಗಳಿಗೆ ಸೌಲಭ್ಯಗಳ ಅಭಿವೃದ್ಧಿಯನ್ನು ಸುಲಭಗೊಳಿಸಲು ಕರಾವಳಿ ಕರ್ನಾಟಕದ ಪ್ರವಾಸೋದ್ಯಮ ಯೋಜನೆಗಳಿಗೆ ಹೂಡಿಕೆಗೆ ಅನುಕೂಲವಾಗುವಂತೆ ಮತ್ತು ಅಗತ್ಯ ಬೆಂಬಲವನ್ನು ಒದಗಿಸಲು "ಕರಾವಳಿ ಪ್ರವಾಸೋದ್ಯಮ ಅಭಿವೃದ್ಧಿ ಕೋಶ" ರೂಪದಲ್ಲಿ ಒಂದು ಮೀಸಲಾದ ಸಾಂಸ್ಥಿಕ ಕಾರ್ಯವಿಧಾನವನ್ನು ಸ್ಥಾಪಿಸಲು ಕ್ರಮವಹಿಸಲಾಗುತ್ತಿದೆ.

ಇದರಿಂದ, ರಾಜ್ಯದ ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಲು ಕರಾವಳಿ ಭಾಗದಿಂದ ಸ್ವೀಕೃತವಾಗುವ ಪ್ರಸ್ತಾವನೆಗಳಿಗೆ ಆದ್ಯತೆ ನೀಡುವುದರ ಮೂಲಕ ಕರಾವಳಿ ಪ್ರವಾಸೋದ್ಯಮವನ್ನು ಉತ್ತೇಜಿಸಲು ಈ ಕೋಶ ಸಹಕಾರಿಯಾಗಲಿದೆ.

ಇದಲ್ಲದೇ, ಕರಾವಳಿ ಭಾಗದ ಜಿಲ್ಲೆಗಳಲ್ಲಿ ಸುಸ್ಥಿರ ಪ್ರವಾಸೋದ್ಯಮದ ಅಭಿವೃದ್ಧಿಗಾಗಿ ಕರಾವಳಿ ಪ್ರವಾಸೋದ್ಯಮ ಹೂಡಿಕೆದಾರರ ಕಾರ್ಯಾಗಾರವನ್ನು (Coastal Tourism Investors Workshop) ಕೈಗೊಳ್ಳಲು ಕ್ರಮವಹಿಸಲಾಗುತ್ತಿದೆ. ಈ ಕಾರ್ಯಾಗಾರದಿಂದ ಕರಾವಳಿ ಜಿಲ್ಲೆಗಳ ಭಾಗದ ಹೂಡಿಕೆದಾರರು ಪ್ರವಾಸೋದ್ಯಮ ಮೂಲಸೌಕರ್ಯಗಳ ಅಭಿವೃದ್ಧಿ ಮೇಲೆ ಹೂಡಿಕೆ ಮಾಡಲು ಅಗತ್ಯ ಸಲಹೆ ಮತ್ತು ಸಹಕಾರವನ್ನು ನೀಡಲಾಗುವುದು. ಸುಸ್ಥಿರ ಪ್ರವಾಸೋದ್ಯಮ ಬೆಳವಣಿಗೆಗಾಗಿ ಹೂಡಿಕೆದಾರರಿಗೆ ಅನುಕೂಲವಾಗಲು CRZ ನಿರಾಕ್ಷೇಪಣಾ, ಸಂಬಂಧಪಟ್ಟ ಇಲಾಖೆಗಳೊಂದಿಗೆ ಸಮಾಲೋಚನೆ ಹಾಗೂ ಹೂಡಿಕೆದಾರರಿಗೆ ಅಗತ್ಯ ಮಾರ್ಗದರ್ಶನ ಮತ್ತು ಅನುಮೋದನೆ ಪಡೆಯುವಲ್ಲಿ ಹಾಗೂ ಹೂಡಿಕೆದಾರರಿಗೆ ಕರಾವಳಿ ಭಾಗದ ಜಿಲ್ಲೆಗಳಲ್ಲಿ ಹೂಡಿಕೆ ಮಾಡಲು ಇರುವ ಅವಕಾಶಗಳ ಬಗ್ಗೆ ಮನವರಿಕೆ ಮಾಡಲು ಈ ಕಾರ್ಯಾಗಾರ ಸಹಕಾರಿಯಾಗಲಿದೆ.

ಕರ್ನಾಟಕ ಪ್ರವಾಸೋದ್ಯಮ ನೀತಿ 2024-29 ಅನ್ನು ಜಾರಿಗೆ ತರಲಾಗಿದೆ. ಸದರಿ ನೀತಿ ಅಡಿಯಲ್ಲಿ, ಕರ್ನಾಟಕದ ಕರಾವಳಿ ಜಿಲ್ಲೆಗಳಲ್ಲಿ ಅಂದರೆ, ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಪ್ರವಾಸೋದ್ಯಮ ಯೋಜನೆಗಳ ಸ್ಥಾಪನೆ ಮತ್ತು ಕಾರ್ಯಾಚರಣೆಗೆ ಅನುಕೂಲಕರ ವಾತಾವರಣವನ್ನು ಸೃಷ್ಟಿಸಲು ಯೋಜಿಸಲಾಗಿದೆ. ಪ್ರವಾಸೋದ್ಯಮ ಅಭಿವೃದ್ಧಿ ಯೋಜನೆಗಳಿಗೆ ಆದ್ಯತೆ ನೀಡುವುದು, ಹೂಡಿಕೆಗಳನ್ನು ಸುಗಮಗೊಳಿಸುವುದು ಮತ್ತು ಕರಾವಳಿ ಕರ್ನಾಟಕದಲ್ಲಿ ಸುಲಭವಾಗಿ ವ್ಯಾಪಾರ ಮಾಡುವುದನ್ನು ಸುಧಾರಿಸುವ ಮೂಲಕ ಅಗತ್ಯ ಬೆಂಬಲವನ್ನು ನೀಡಲು ಯೋಜಿಸಿದೆ.

ಕರಾವಳಿ ಭಾಗದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗಾಗಿ Public Private Partnership ಮಾದರಿಯಲ್ಲಿ ಹೂಡಿಕೆ ಮಾಡಲು ಆಸಕ್ತಿ ಇರುವ ಹೂಡಿಕೆದಾರರನ್ನು ಒಟ್ಟುಗೂಡಿಸಲು ಈಗಾಗಲೇ ಇಲಾಖೆಯಿಂದ Expression of Interest (EoI) ಆಹ್ವಾನಿಸಲಾಗಿದ್ದು, ಆಸಕ್ತಿದಾರರು ಭಾಗವಹಿಸಿದ್ದು, ಈ ಬಗ್ಗೆ ಇಲಾಖೆಯಿಂದ ಪರಿಶೀಲಿಸಲಾಗುತ್ತಿದೆ.

**ಸಂಖ್ಯೆ:ಟಿ.ಓ.ಆರ್. 273 ಟಿ.ಡಿ.ವಿ 2024**

**(ಹೆಚ್.ಕೆ. ಪಾಟೀಲ)**
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು, ಶಾಸನ ರಚನೆ
ಹಾಗೂ ಪ್ರವಾಸೋದ್ಯಮ ಸಚಿವರು